<table>
<tr><td colspan="4">ಕರ್ನಾಟಕ ಸರ್ಕಾರ<br>(ಸಿ.ಆರ್.ಪಿ-67)</td></tr>
<tr><td rowspan="4">ಹೇಳಿಕೆ ಹಾಳೆ (ಆರ್.ಸಿ. ಸಂಖ್ಯೆ 57) ನಮೂನೆ ಸಂಖ್ಯೆ 4</td><td colspan="3">ಪ್ರಧಾನ ದಿವಾಣಿ ಹಾಗೂ ಪ್ರ.ದ.ನ್ಯಾ.ದಂ.ಗಳ ನ್ಯಾಯಾಲಯ, ಚನ್ನಪಟ್ಟಣ</td></tr>
<tr><td colspan="3">ಸಿ.ಸಿ ನಂ. 4609/2022</td></tr>
<tr><td></td><td>ಸಿ.ಡಬ್ಲ್ಯೂ</td><td>5</td></tr>
<tr><td></td><td>ಪಿ.ಡಬ್ಲ್ಯೂ</td><td>4</td></tr>
<tr><td>ಸಾಕ್ಷಿದಾರರ ಹೆಸರು</td><td colspan="3">ಭರತ್ ಕುಮಾರ್ ಬಿನ್ ಕಲಸಯ್ಯ</td></tr>
<tr><td>ವಯಸ್ಸು</td><td colspan="3">35 ವರ್ಷ</td></tr>
<tr><td>ಉದ್ಯೋಗ</td><td colspan="3">ಪೈಂಟಿಂಗ್ ಕೆಲಸ</td></tr>
<tr><td>ವಾಸಸ್ಥಳ</td><td colspan="3">ಚನ್ನಪಟ್ಟಣ</td></tr>
</table>

ದಿನಾಂಕಃ **16.04.2025** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು

**ಮುಖ್ಯ ವಿಚಾರಣೆಃ- ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

**1)** ಸಾಕ್ಷಿಯು ದಿಃ**06.03.2022** ರಂದು ಮಾಡಲಾದ ಪಂಚನಾಮೆಯಲ್ಲಿ ಇರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ಪಂಚನಾಮೆಯನ್ನು ನಿಪಿ.**3** ಎಂದು, ಸಾಕ್ಷಿಯ ಸಹಿಯನ್ನು ನಿಪಿ.**3**(ಎ) ಎಂದು ಗುರುತಿಸಲಾಯಿತು. ನಿಪಿ.**3** ಕ್ಕೆ ಪೋಲಿಸರ ಕೋರಿಕೆಯ ಮೇರೆಗೆ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನಿಪಿ.**3** ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿರುವುದಿಲ್ಲ.

**ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಅನುಮತಿ ಕೋರಿದ್ದು, ಕೋರಿಕೆಯ ಮೇರೆಗೆ ಅನುಮತಿ ನೀಡಲಾಗಿದೆ.**

**ಪಾಟೀ ಸವಾಲುಃ- ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

1) ದಿ.**06.03.2022** ರಂದು ಬೆಳಿಗ್ಗೆ **11.00** ರಿಂದ **11.45** ರ ಸಮಯದಲ್ಲಿ ಚನ್ನಪಟ್ಟಣ ತಾಲ್ಲೂಕಿನ ಅಂಚೆ ಕಛೇರಿಯ ರಸ್ತೆಯಲ್ಲಿ ಇರುವ ಕೊಲ್ಲಾಪುರದಮ್ಮ ದೇವಸ್ಥಾನದ ಮುಂದೆ ಇರುವ ಖಾಲಿ ಜಾಗದಲ್ಲಿ ಪೋಲಿಸರು ನನ್ನ ಸಮಕ್ಷಮ ನಿಪಿ.**3** ರಂತೆ ಪಂಚನಾಮೆಯನ್ನು ಮಾಡಿದ್ದು ಸದರಿ ಸ್ಥಳದಲ್ಲಿ ಆರೋಪಿತರು ಗೋಣಿ ಚೀಲಗಳನ್ನು ಸುಟ್ಟಿ ಹಾಕಿದ್ದರು ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ- ಇಲ್ಲ.**

**<u>ಪಾಟೀ ಸವಾಲುಃ</u> ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲವೆಂದು ನುಡಿದಿರುತ್ತಾರೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕೀಕರಣ ಮಾಡಲಾಯಿತು)

ಓ.ಹೆ.ಕೆ.ಸರಿ ಇದೆ.

ಪ್ರಧಾನ ದಿವಾಣಿ ಹಾಗೂ ಪ್ರ.ದ.ನ್ಯಾ.ದಂ.ಗಳು
ಚನ್ನಪಟ್ಟಣ.